ಗುರುವಾರ 14.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 24 Digital Varthe Kannada Daily Volume 01 - Issue 24 Tuesday 14.08.2025 Price: 5/- Rs 2 Pages Bangalore Rural

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

www.digitalvarthe.com

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

## ‘ಮತಗಳ್ಳತನ’ ಆರೋಪ ಬೆನ್ನಲ್ಲೇ ದೇಶ ತೊರೆದ್ರಾ ಮಾಜಿ CEC ರಾಜೀವ್ ಕುಮಾರ್?



**ನವದೆಹಲಿ:** ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ‘ಮತಗಳ್ಳತನ’ ಆರೋಪ ದೇಶಾದ್ಯಂತ ಭಾರಿ ಚರ್ಚೆ, ವಿವಾದಕ್ಕೆ ಕಾರಣ ಆಗಿರುವಂತೆಯೇ ಮಾಜಿ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ದೇಶ ತೊರೆದಿದ್ದಾರೆ ಎಂಬ ವದಂತಿಗಳು ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡುತ್ತಿವೆ. 2024ರ ಲೋಕಸಭಾ ಚುನಾವಣೆ ರಾಜೀವ್ ಕುಮಾರ್ ಅವರ ಮೇಲುಸ್ತುವಾರಿಯಲ್ಲಿ ನಡೆದಿತ್ತು. ಈ ವರ್ಷದ ಫೆಬ್ರವರಿಯಲ್ಲಿ ಅವರು ಕಚೇರಿಯನ್ನು ತೊರೆದಿದ್ದರು.

### ಮಾಲ್ಟಾದಲ್ಲಿ ನೆಲೆಸಿಲ್ಲ, ಭಾರತದಲ್ಲೇ ಇದ್ದಾರೆ – ಸಾಮಾಜಿಕ ಮಾಧ್ಯಮ ವದಂತಿಗಳಿಗೆ ತಿರುಗೇಟು

ರಾಜೀವ್ ಕುಮಾರ್ ವಿದೇಶದಲ್ಲಿ ನೆಲೆಸಿದ್ದಾರೆ ಎಂಬ ವದಂತಿಗಳನ್ನು ಅವರ ನಿಕಟವರ್ತಿಗಳು ತಳ್ಳಿ ಹಾಕಿದ್ದಾರೆ. ಮಾಜಿ ಮುಖ್ಯ ಚುನಾವಣಾ ಆಯುಕ್ತರು ಭಾರತದಲ್ಲಿಯೇ ಇದ್ದಾರೆ. ಮಾಲ್ಟಾದಲ್ಲಿ ನೆಲೆಸಿಲ್ಲ ಎಂದು ಅವರ ಆಪ್ತ ಮೂಲಗಳು ಹೇಳಿವೆ. ರಾಜೀವ್ ಕುಮಾರ್ ಚುನಾವಣಾ ಆಯೋಗದ ಮುಖ್ಯಸ್ಥರಾಗಿದ್ದಾಗ ಕರ್ನಾಟಕ, ಮಹಾರಾಷ್ಟ್ರ ಮತ್ತು ಹರಿಯಾಣದಲ್ಲಿ ನಡೆದ ಚುನಾವಣೆಯಲ್ಲಿ “ಮತ ಕಳ್ಳತನ’ವಾಗಿದೆ ಎಂದು ರಾಹುಲ್ ಗಾಂಧಿ ಆರೋಪಿಸಿದ್ದರು.

## ರಾಹುಲ್ ಗಾಂಧಿ, ಇಂಡಿಯಾ ಬ್ಲಾಕ್ ನಾಯಕರಿಂದ ಮತ ಯಾತ್ರೆ

**ನವದೆಹಲಿ:** ಬಿಹಾರ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ(ಎಸ್ಐಆರ್) ವಿರುದ್ಧ ಮತ್ತು “ಮತ ಚೋರಿ ವಿರುದ್ಧದ ಹೋರಾಟ”ವನ್ನು ಸಾಮೂಹಿಕ ಆಂದೋಲನವನ್ನಾಗಿ ಮಾಡಲು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಬಿಹಾರದ ಇಂಡಿಯಾ ಬ್ಲಾಕ್ ನಾಯಕರೊಂದಿಗೆ ಆಗಸ್ಟ್ 17 ರಿಂದ ರಾಜ್ಯಾದ್ಯಂತ ‘ಮತ ಅಧಿಕಾರ ಯಾತ್ರೆ,’ ಕೈಗೊಳ್ಳಲಿದ್ದಾರೆ ಎಂದು ಕಾಂಗ್ರೆಸ್ ಬುಧವಾರ ತಿಳಿಸಿದೆ. ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಅವರು X ನಲ್ಲಿ ಮತ ಯಾತ್ರೆಯನ್ನು ಘೋಷಿಸಿದ್ದು, ತಮ್ಮ ಪ್ರಜಾಪ್ರಭುತ್ವವನ್ನು ರಕ್ಷಿಸುವ ಹೋರಾಟ ಬೀದಿಗಳಲ್ಲಿ ನಡೆಯಲಿದೆ ಎಂದು ಹೇಳಿದ್ದಾರೆ.

### SIR ಹಾಗೂ ‘ವೋಟ್ ಚೋರಿ’ ವಿರುದ್ಧ ಇಂಡಿಯಾ ಬ್ಲಾಕ್ ಬೃಹತ್ ಆಂದೋಲನ

“ಆಗಸ್ಟ್ 17 ರಿಂದ, LOP ರಾಹುಲ್ ಗಾಂಧಿ ಮತ್ತು ಇಂಡಿಯಾ ಬ್ಲಾಕ್ ಪಕ್ಷಗಳು ಬಿಹಾರದಾದ್ಯಂತ ಬೃಹತ್ ಮತ ಅಧಿಕಾರ ಯಾತ್ರೆಯನ್ನು ಕೈಗೊಳ್ಳಲಿದ್ದಾರೆ. ಈ ಮೂಲಕ ಅಪಾಯಕಾರಿ SIR ವಿರುದ್ಧ ಮತ್ತು ವೋಟ್ ಚೋರಿ ವಿರುದ್ಧದ ಹೋರಾಟವನ್ನು ಸಾಮೂಹಿಕ ಆಂದೋಲನವನ್ನಾಗಿ ಮಾಡಲಾಗುವುದು!” ಎಂದು ತಿಳಿಸಿದ್ದಾರೆ.


## ಸರ್ವಾಂಗಾಸನದಲ್ಲಿ ಗ್ಲೋಬಲ್ ಯೋಗಾ ರೆಕಾರ್ಡ್ ನೆಲಮಂಗಲದ ಜಸ್ವಂತ್ ಆರ್.ಕೆ ಸಾಧನೆಗೆ ಮೆಚ್ಚುಗೆ



**ನೆಲಮಂಗಲ:** ನಗರದ ದಾನೋಜಿಪಾಳ್ಯದಲ್ಲಿರುವ ವಾಗ್ದೇವಿ ವಿಲಾಸ್ ಶಾಲೆಯ 4ನೇ ತರಗತಿ ವಿದ್ಯಾರ್ಥಿ ಮಾಸ್ಟರ್ ಜಸ್ವಂತ್ ಆರ್.ಕೆ. ಯೋಗಾಸನದಲ್ಲಿನ ಸರ್ವಾಂಗಾಸನ ಎಂಬ ಆಸನದಲ್ಲಿ ಗ್ಲೋಬಲ್ ಯೋಗಾ ರೆಕಾರ್ಡ್ ಮಾಡುವ ಮೂಲಕ ತಾಲೂಕಿನ ಕೀರ್ತಿಯನ್ನು ಹೆಚ್ಚಿಸಿದ್ದಾನೆ.

ಕಳೆದ ಜೂನ್ 20 ರಂದು ನೆಲಮಂಗಲ ನಗರದಲ್ಲಿರುವ ಸಾಧನ ಯೋಗಾ ಕೇಂದ್ರದಲ್ಲಿ ಹಮ್ಮಿಕೊಂಡಿದ್ದಪ್ರದರ್ಶನದಲ್ಲಿಸರ್ವಾಂಗಾಸನವನ್ನು ಪ್ರದರ್ಶಿಸಿದ ಜಸ್ವಂತ್.ಆರ್.ಕೆ 10ನಿಮಿಷ 04ಸೆಕೆಂಡ್‌ಗಳ ಕಾಲ ಸರ್ವಾಂಗಾಸನದ ಭಂಗಿಯಲ್ಲಿದ್ದು ಸಾಧನೆಮಾಡಿದ್ದಾನೆ. ಜಸ್ವಂತ್ ಸಾಧನೆಯನ್ನು ಗ್ಲೋಬಲ್ ಯೋಗಾ ರೆಕಾರ್ಡ್ ಸಂಸ್ಥೆ ಘೋಷಣೆಮಾಡಿದೆ.

### 4ನೇ ತರಗತಿ ವಿದ್ಯಾರ್ಥಿಯ ಸಾಧನೆ – 10 ನಿಮಿಷ 04 ಸೆಕೆಂಡ್ ಭಂಗಿ ಪ್ರದರ್ಶನ



ಸಾಧನ ಯೋಗಾ ಕೇಂದ್ರ ಮುಖ್ಯಸ್ಥ ವಾದಿರಾಜ್ ಮಾತನಾಡಿ ನಮ್ಮ ಸಂಸ್ಥೆಯವತಿಯಿಂದ ಜೂನ್ 29 ರಂದು ಅಂತರ್ ರಾಷ್ಟ್ರೀಯ ಯೋಗಾ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡಿದ್ದ ಯೋಗಾಸನದ ಪ್ರದರ್ಶನ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳು ವಿವಿಧ ಯೋಗಭಂಗಿಗಳನ್ನು ಪ್ರದರ್ಶಿಸಿದ್ದು ಪತ್ರಕರ್ತ ಕೊಟ್ರೇಶ್.ಆರ್ ಹಾಗೂ ಸ್ವರ್ಣ ದಂಪತಿಗಳ ಪುತ್ರ ಜಸ್ವಂತ್.ಆರ್.ಕೆ ಹಾಗೂ ಮತ್ತಿತರ ಕೆಲ ವಿದ್ಯಾರ್ಥಿಗಳು ಗ್ಲೋಬಲ್ ವರ್ಲ್ಡ್ ರೆಕಾರ್ಡ್ ಮಾಡಿರುವುದು ಸಂತವನ್ನು ತಂದಿದೆ. ಪ್ರತಿಯೊಬ್ಬರು ಪ್ರತಿನಿತ್ಯ ಕನಿಷ್ಟ ಒಂದುಗಂಟೆಗಳ ಕಾಲ ಯೋಗಾಸನವನ್ನು ಮಾಡುವ ಮೂಲಕ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದು ತಿಳಿಸಿದರು.

**ಅಭಿನಂದನೆ:** ಜಸ್ವಂತ್.ಆರ್.ಕೆ. ಅವರನ್ನು ವಾಗ್ದೇವಿ ವಿಲಾಸ್ ಶಾಲೆಯ ಪ್ರಾಂಶುಪಾಲರಾದ ರೇಣುಕಾದೇವಿ, ಶಾಲೆಯ ಆಡಳಿತಾಧಿಕಾರಿ ರಂಜಿತ್, ಸಾಧನ ಯೋಗಾ ಕೇಂದ್ರದ ಮುಖ್ಯಸ್ಥ ವಾದಿರಾಜ್, ಯೋಗ ಶಿಕ್ಷಕಿ ಸೀತಾ ಸೇರಿದಂತೆ ಶಾಲೆಯ ಭೋದಕ ಮತ್ತು ಭೋದಕೇತರ ಸಿಬ್ಬಂಧಿಗಳು ಅಭಿನಂದಿಸಿದರು.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

## ನಿವೃತ್ತ ಡಿಜಿಪಿ ಓಂ ಪ್ರಕಾಶ್ ಹತ್ಯೆ: 1,150 ಪುಟಗಳ ಚಾರ್ಜ್ ಶೀಟ್



ಬೆಂಗಳೂರು: ಮಾಜಿ ಡಿಜಿಪಿ ಓಂ ಪ್ರಕಾಶ್ ಅವರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಕೇಂದ್ರ ಅಪರಾಧ ವಿಭಾಗ (ಸಿಸಿಬಿ) 1,150 ಪುಟಗಳ ಚಾರ್ಜ್ ಶೀಟ್ ಸಲ್ಲಿಸಿದ್ದು, ಪತ್ನಿ ಪಲ್ಲವಿ ಅವರನ್ನು ಪ್ರಮುಖ ಆರೋಪಿ ಎಂದು ಹೆಸರಿಸಿದೆ.

1981ನೇ ಬ್ಯಾಚ್ ಐಪಿಎಸ್ ಅಧಿಕಾರಿ ಪ್ರಕಾಶ್ ಅವರನ್ನು ಏಪ್ರಿಲ್ 20 ರಂದು ಬೆಂಗಳೂರಿನ ಎಚ್‌ಎಸ್‌ಆರ್ ಲೇಔಟ್ ನಿವಾಸದಲ್ಲಿ ಪಲ್ಲವಿ ಕೊಲೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಈ ಪ್ರಕರಣ ದೇಶಾದ್ಯಂತ ತೀವ್ರಗಮನ ಸೆಳೆದಿತ್ತು. ಅಪರಾಧದ ತೀವ್ರತೆಯನ್ನು ಪರಿಗಣಿಸಿ, ಕರ್ನಾಟಕ ಸರ್ಕಾರ ತನಿಖೆಯನ್ನು ಸಿಸಿಬಿಗೆ ವರ್ಗಾಯಿಸಿತ್ತು.

ಸಿಸಿಬಿ ಮೂಲಗಳ ಪ್ರಕಾರ, ಕೊಲೆಗೆ ಸಂಬಂಧಿಸಿದಂತೆ ಮೊದಲ ಎಸಿಎಂಎಂ ನ್ಯಾಯಾಲಯದಲ್ಲಿಆರೋಪಪಟ್ಟಿಸಲ್ಲಿಸಲಾಗಿದ್ದು, ಓಂ ಪ್ರಕಾಶ್ ಅವರ ಪತ್ನಿ ಪಲ್ಲವಿ ಅವರನ್ನು ಪ್ರಮುಖ ಆರೋಪಿಯನ್ನಾಗಿ ಹೆಸರಿಸಲಾಗಿದೆ. ಮಗಳು ಕೃತಿ ಅವರನ್ನು ಆರೋಪಗಳಿಂದ ಮುಕ್ತಗೊಳಿಸಲಾಗಿದೆ. ತನಿಖಾಧಿಕಾರಿಗಳ ಪ್ರಕಾರ, ಕೊಲೆ ಪಿತೂರಿಯಲ್ಲಿ ಕೃತಿ ಅವರ ಪಾತ್ರವಿದೆ ಎಂದು ಹೇಳಲು ಸಾಕಷ್ಟು ಪುರಾವೆಗಳಿಲ್ಲ.

ಘಟನೆ ನಡೆದ ಸಮಯದಲ್ಲಿ ಅವರು ಎಚ್‌ಎಸ್‌ಆರ್ ಲೇಔಟ್ ನಿವಾಸದ ಮೇಲಿನ ಮಹಡಿಯಲ್ಲಿದ್ದರು ಎಂದು ವರದಿಯಾಗಿದೆ. ಅಪರಾಧದಲ್ಲಿ ಅವರ ಪಾತ್ರವಿದೆ ಎಂದು ಹೇಳುವ ವಿಶ್ವಾಸಾರ್ಹ ಪುರಾವೆಗಳು ಲಭ್ಯವಿಲ್ಲದ ಕಾರಣ ಅವರ ಹೆಸರನ್ನು ಆರೋಪ ಪಟ್ಟಿಯಿಂದ ಕೈಬಿಡಲಾಗಿದೆ.

ಸದ್ಯ, ಪಲ್ಲವಿ ಅವರನ್ನು ಕೊಲೆ ಆರೋಪದ ಮೇಲೆ ಬಂಧಿಸಲಾಗಿದ್ದು, ನ್ಯಾಯಾಂಗ ಬಂಧನದಲ್ಲಿದ್ದಾರೆ. ವಿವರವಾದ ತನಿಖೆಯ ನಂತರ, ಸಿಸಿಬಿ ಅಧಿಕಾರಿಗಳು ಪಲ್ಲವಿ ವಿರುದ್ಧ ಸಾಕ್ಷ್ಯಗಳನ್ನು ಸಂಗ್ರಹಿಸಿ ಆರೋಪ ಪಟ್ಟಿ ಸಲ್ಲಿಸಿದ್ದಾರೆ.

## ಆಗಸ್ಟ್ 17 ರಂದು ಧರ್ಮಸ್ಥಳಕ್ಕೆ ಬಿಜೆಪಿ ಶಾಸಕರ ಭೇಟಿ

ಬೆಂಗಳೂರು: ಸಾಮೂಹಿಕ ಸಮಾಧಿ ಪ್ರಕರಣದ ತನಿಖೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಆಗಸ್ಟ್17 ರಂದು ದಕ್ಷಿಣ ಕನ್ನಡ ಜಿಲ್ಲೆಯ ದೇವಾಲಯ ಪಟ್ಟಣ ಧರ್ಮಸ್ಥಳಕ್ಕೆ ನಮ್ಮ ಶಾಸಕರು ಭೇಟಿ ನೀಡಲಿದ್ದಾರೆ ಎಂದು ಬಿಜೆಪಿ ಬುಧವಾರ ಘೋಷಿಸಿದೆ. ಮಂಜುನಾಥಸ್ವಾಮಿ ಮತ್ತು ಅಣ್ಣಪ್ಪ ಸ್ವಾಮಿಗೆ ಪೂಜೆ ಸಲ್ಲಿಸುವುದು ಮಾತ್ರ ನಮ್ಮ ಉದ್ದೇಶ ಎಂದು ಪಕ್ಷದ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಅವರು ಹೇಳಿದ್ದಾರೆ.

ಮುಂದಿನ ಭಾನುವಾರ ಆಗಸ್ಟ್ 17 ರಂದು, ನಮ್ಮ ಎಲ್ಲಾ ಹಿರಿಯ ಶಾಸಕರು ಮತ್ತು ಎಂಎಲ್‌ಸಿಗಳು ಧರ್ಮಸ್ಥಳಕ್ಕೆ ಭೇಟಿ ನೀಡಲಿದ್ದಾರೆ. ನಾವು ಮಂಜುನಾಥ ಸ್ವಾಮಿಯ ಆಶೀರ್ವಾದ ಪಡೆಯುತ್ತೇವೆ ಎಂದು ವಿಜಯೇಂದ್ರ ಅವರು ಇಂದು ಸುದ್ದಿಗಾರರಿಗೆ ತಿಳಿಸಿದ್ದಾರೆ. ಭೇಟಿಯ ಹಿಂದಿನ ಕಾರಣದ ಬಗ್ಗೆ ಕೇಳಿದಾಗ, ನಾವು ಅಲ್ಲಿ ನಡೆಯುತ್ತಿರುವ ತನಿಖೆಯಲ್ಲಿ ಮಧ್ಯ ಪ್ರವೇಶಿಸುವುದಿಲ್ಲ. ನಾವು ಅಲ್ಲಿಗೆ ಬಿಜೆಪಿ ನಾಯಕರಾಗಿ ಅಲ್ಲ, ಬದಲಾಗಿ ಮಂಜುನಾಥ ಸ್ವಾಮಿಯ ಭಕ್ತರಾಗಿ ಹೋಗುತ್ತಿದ್ದೇವೆ ಎಂದು ವಿಜಯೇಂದ್ರ ಹೇಳಿದ್ದಾರೆ.

ಧರ್ಮಸ್ಥಳ ಸಮಾಧಿ ಪ್ರಕರಣಕ್ಕೆ ಸಂಬಂಧಿಸಿದಂತೆ “ಸತ್ಯ ಹೊರಬರಬೇಕು ಮತ್ತು ಗೊಂದಲ ಶೀಘ್ರದಲ್ಲೇ ಕೊನೆಗೊಳ್ಳಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷರು ತಿಳಿಸಿದ್ದಾರೆ. ಎಸ್‌ಡಿಪಿಐನಂತಹ ಸಮಾಜವಿರೋಧಿ ಶಕ್ತಿಗಳು ತನಿಖೆಯ ಹಿಂದೆ ಕೈವಾಡವಿದೆ ಎಂಬ ಗುಸುಗುಸು ಕೇಳಿಬರುತ್ತಿವೆ ಎಂದಿದ್ದಾರೆ.

### ಮಣ್ಣು ಅಗೆದಿದ್ದೊಂದೇ ಬಂತು: ಜೋಷಿ

ಧರ್ಮಸ್ಥಳದ 13 ಉತ್ಖನನ ಮಾಡಿದ ಜಾಗಗಳಲ್ಲಿ ಈವರೆಗೂ ಮಣ್ಣು ಅಗೆದಿದ್ದೊಂದೇ ಬಂತು. ಅನಾಮಿಕ ಆರೋಪಿಸಿದಂತೆ ಏನೊಂದೂ ಗುರುತರ ಸಾಕ್ಷಿ, ಶವಗಳ ಅವಶೇಷ ಸಿಗದಾಯಿತು. ಹೀಗಾಗಿ ಸಿಎಂ ಈಗ ತಮ್ಮ ಸರ್ಕಾರಕ್ಕೆ ಕೆಟ್ಟ ಹೆಸರು ಬರುತ್ತದೆಂಬ ಕಾರಣಕ್ಕೆ ಧರ್ಮಸ್ಥಳ ತನಿಖೆಯಲ್ಲಿ ಸರ್ಕಾರದ ಪಾತ್ರವಿಲ್ಲ’ ಎನ್ನುತ್ತಿದ್ದಾರೆಂದು ಸಚಿವ ಜೋಶಿ ಟೀಕಿಸಿದ್ದಾರೆ.

ಧರ್ಮಸ್ಥಳದ 13 ಉತ್ಖನನ ಮಾಡಿದ ಜಾಗಗಳಲ್ಲಿ ಈವರೆಗೂ ಮಣ್ಣು ಅಗೆದಿದ್ದೊಂದೇ ಬಂತು. ಅನಾಮಿಕ ಆರೋಪಿಸಿದಂತೆ ಏನೊಂದೂ ಗುರುತರ ಸಾಕ್ಷಿ, ಶವಗಳ ಅವಶೇಷ ಸಿಗದಾಯಿತು. ಹೀಗಾಗಿ ಸಿಎಂ ಈಗ ತಮ್ಮ ಸರ್ಕಾರಕ್ಕೆ ಕೆಟ್ಟ ಹೆಸರು ಬರುತ್ತದೆಂಬ ಕಾರಣಕ್ಕೆ ಧರ್ಮಸ್ಥಳ ತನಿಖೆಯಲ್ಲಿ ಸರ್ಕಾರದ ಪಾತ್ರವಿಲ್ಲ’ ಎನ್ನುತ್ತಿದ್ದಾರೆಂದು ಸಚಿವ ಜೋಶಿ ಟೀಕಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ಅಶ್ವತ್ ನಾರಾಯಣ ವಿರುದ್ಧ ಡಿ.ಕೆ. ಶಿವಕುಮಾರ್ ಏಕವಚನದಲ್ಲಿ ವಾಗ್ದಾಳಿ

## "ನೀನು, ನಿನ್ನ ಪಕ್ಷ– ಭ್ರಷ್ಟಾಚಾರದ ಪಿತಾಮಹರು" – ವಿಧಾನಸಭೆಯಲ್ಲಿ ಚಕಮಕಿ

ಬೆಂಗಳೂರು: "ಅಶ್ವತ್ ನಾರಾಯಣ ನೀನು, ನಿನ್ನ ಪಕ್ಷ ಭ್ರಷ್ಟಾಚಾರದ ಪಿತಾಮಹರು. ರಾಮನಗರದಲ್ಲಿ ಒಂದೂ ಕ್ಷೇತ್ರ ಗೆಲ್ಲಲಾಗದವ, ಅಲ್ಪಸಂಖ್ಯಾತ ನಾಯಕನನ್ನು ಅಸಮರ್ಥ ಎನ್ನುತ್ತೀಯಾ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹರಿಹಾಯ್ದರು. ವಿಧಾನಸಭೆ ಕಲಾಪದಲ್ಲಿ ರಸಗೊಬ್ಬರ ಕೊರತೆ ವಿಚಾರವಾಗಿ ನಡೆದ ಚರ್ಚೆ ವೇಳೆ ಆಡಳಿತ ಹಾಗೂ ವಿರೋಧ ಪಕ್ಷಗಳ ನಡುವೆ ಬುಧವಾರ ಬಿರುಸಿನ ಮಾತಿನ ಚಕಮಕಿ ನಡೆಯಿತು.

ಬಿಜೆಪಿ ಶಾಸಕ ಅರವಿಂದ್ ಬೆಲ್ಲದ್ ಅವರು ಚರ್ಚೆ ವೇಳೆ ಮಾತನಾಡುವಾಗ ತಪ್ಪು ಅಂಕಿ ಅಂಶಗಳನ್ನು ನೀಡಿದ ಕಾರಣ ಕೃಷಿ ಸಚಿವ ಚಲುವರಾಯಸ್ವಾಮಿ ಅವರು ಸರಿ ಅಂಕಿ-ಅಂಶಗಳ ಸ್ಪಷ್ಟನೆ ನೀಡಲು ಮುಂದಾದರು. ಈ ವೇಳೆ ಅಶ್ವತ್ ನಾರಾಯಣ ಅವರು ಮಧ್ಯಪ್ರವೇಶಿಸಿ ವಾಗ್ವಾದ ಆರಂಭಿಸಿದರು. ಆಗ ಸಚಿವ ಕೆ.ಜೆ ಜಾರ್ಜ್ ಅವರು, 'ಸುಳ್ಳು ಹೇಳಬೇಡಿ' ಎಂದು ಹೇಳಿದಾಗ, ಅಶ್ವತ್ಥ್ ನಾರಾಯಣ ಅವರು, 'ಸ್ಮಾರ್ಟ್ ಮೀಟರ್ ವಿಚಾರವಾಗಿ ಮಾತನಾಡಲು ನಿಮಗೆ ಧಮ್,





ಯೋಗ್ಯತೆ ಇಲ್ಲ, ನೀವು ಅಸಮರ್ಥ' ಎಂದು ಟೀಕೆ ಮಾಡಿದರು. ಈ ವೇಳೆ ಮಧ್ಯ ಪ್ರವೇಶಿಸಿದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು, "ಅಸಮರ್ಥರು ಅವರಲ್ಲ. ನೀವು ಅಸಮರ್ಥರು. ರಾಜ್ಯದ ಜನ ಮತ ನೀಡಿ ಅಧಿಕಾರ ನಡೆಸಲು ಅವಕಾಶ ನೀಡಿರುವ ಜಾರ್ಜ್ ಅವರು ಅಸಮರ್ಥರಲ್ಲ, ನೀವು ಅಸಮರ್ಥರಾಗಿರುವ ಕಾರಣ ನಿಮ್ಮ ಪಕ್ಷ ವಿರೋಧ ಪಕ್ಷದ ಸ್ಥಾನದಲ್ಲಿ ಕುಳಿತಿದೆ" ಎಂದು ತಿರುಗೇಟು ನೀಡಿದರು.

ಈ ವೇಳೆ ಅಶ್ವತ್ ನಾರಾಯಣ ಅವರು "ಈ ಸರ್ಕಾರ ಅಸಮರ್ಥ, ಜನವಿರೋಧಿ, ಭ್ರಷ್ಟಾಚಾರ ಸರ್ಕಾರ" ಎಂದರು. ಇದಕ್ಕೆ ತಿರುಗೇಟು ನೀಡಿದ ಶಿವಕುಮಾರ್ ಅವರು, "ನೀನು, ನಿನ್ನ ಪಕ್ಷ ಭ್ರಷ್ಟಾಚಾರದ ಪಿತಾಮಹರು. ನಿಮ್ಮ ಭ್ರಷ್ಟಾಚಾರದಿಂದಲೇ ನಾವು 135 ಸ್ಥಾನಗಳೊಂದಿಗೆ ಅಧಿಕಾರಕ್ಕೆ ಬಂದಿದ್ದೇವೆ. ನೀನು ರಾಮನಗರಕ್ಕೆ ಜಿಲ್ಲಾ ಉಸ್ತುವಾರಿ ಮಂತ್ರಿಯಾಗಿ ಬಂದಿದ್ಯಲ್ಲ.., ಆಗ ನಿನಗೆ ಡೆಪಾಸಿಟ್ ಕೂಡ ಬರಲಿಲ್ಲ. ರಾಮನಗರದಲ್ಲಿ 1 ಸೀಟ್ ಕೂಡ ಬರಲಿಲ್ಲ. ನೀನು ನಿಜವಾದ ಅಸಮರ್ಥ" ಎಂದು ಕೆಂಡಾ- ಮಂಡಲರಾದರು.

ಈ ವೇಳೆ ಆಡಳಿತ ಪಕ್ಷ ಹಾಗೂ ವಿರೋಧ ಪಕ್ಷಗಳ ನಡುವೆ ವಾಗ್ವಾದ ಹೆಚ್ಚಾದ ಕಾರಣ ಸ್ಪೀಕರ್ ಅವರು ಕಲಾಪವನ್ನು ಅಲ್ಪ ಅವಧಿಗೆ ಮುಂದೂಡಿದರು.

- ವಿಧಾನಸಭೆಯಲ್ಲಿ ರಸಗೊಬ್ಬರ ಕೊರತೆ ಕುರಿತ ಚರ್ಚೆ
- ಅಶ್ವತ್ ನಾರಾಯಣ–ಕೆ.ಜೆ. ಜಾರ್ಜ್ ನಡುವೆ ವಾಗ್ವಾದ
- ಡಿಸಿಎಂ ಡಿ.ಕೆ.ಶಿವಕುಮಾರ್ ನೇರ ತಿರುಗೇಟು
- "ಭ್ರಷ್ಟಾಚಾರದ ಪಿತಾಮಹರು" ಎಂದು ಬಿಜೆಪಿ ಮೇಲೆ ಆರೋಪ
- ಸ್ಪೀಕರ್ ಕಲಾಪವನ್ನು ಅಲ್ಪಾವಧಿಗೆ ಮುಂದೂಡಿದರು

## ಸಣ್ಣ ಉದ್ಯಮದಾರರಿಗೆ ಸಿಹಿಸುದ್ದಿ: ಭೂ ಸುಧಾರಣೆ ತಿದ್ದುಪಡಿ ವಿಧೇಯಕ ಅಂಗೀಕಾರ

ಬೆಂಗಳೂರು: ಸಣ್ಣ ಉದ್ದಿಮೆ ಸ್ಥಾಪಿಸಲು ಗ್ರಾಮೀಣ ಭಾಗದಲ್ಲಿ ಎರಡು ಎಕರೆವರೆಗೆ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಸಲು ಅವಕಾಶ ಕಲ್ಪಿಸುವ 2025ರ ಕರ್ನಾಟಕ ಭೂ ಸುಧಾರಣೆಗಳು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕಕ್ಕೆ ವಿಧಾನಸಭೆಯಲ್ಲಿ ಅಂಗೀಕಾರ ದೊರೆಯಿತು.

ಕಂದಾಯ ಸಚಿವ ಕೃಷ್ಣಭೈರೇಗೌಡ ವಿಧೇಯಕ ಕುರಿತು ಮಾತನಾಡಿ, ಖಾಸಗಿ ವ್ಯಕ್ತಿಗಳ ಕೃಷಿ ಜಮೀನನ್ನು ಶಿಕ್ಷಣ ಸಂಸ್ಥೆಗಳು ಅಥವಾ ಸಣ್ಣ ಉದ್ದಿಮೆ/ಕೈಗಾರಿಕೆಗಳಿಗೆ ಖರೀದಿಸಲು ಸೆಕ್ಷನ್ 109ರ ಅಡಿ ಈ ಹಿಂದೆಯೇ ಅನುಮತಿ ನೀಡಲಾಗಿದೆ. ಆದರೆ, ಆ ಅನುಮತಿಗಾಗಿ ಅವರು ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮನವಿ ಸಲ್ಲಿಸಬೇಕಿತ್ತು. ಈ ನಿಯಮಕ್ಕೆ ತಿದ್ದುಪಡಿ ಮಾಡಲಾಗಿದ್ದು, ಅಧಿಕಾರವನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ನೀಡಲಾಗಿದೆ ಎಂದು ಹೇಳಿದರು.

# ಆಂಧ್ರದಲ್ಲಿ ಅತಿದೊಡ್ಡ ಚುನಾವಣಾ ಅಕ್ರಮ ನಡೆದಿದೆ; ಈ ಬಗ್ಗೆ ರಾಹುಲ್ ಏಕೆ ಮಾತನಾಡುತ್ತಿಲ್ಲ?



ಅಮರಾವತಿ: 2024ರ ಸಾರ್ವತ್ರಿಕ ಚುನಾವಣೆಯ ಸಮಯದಲ್ಲಿ ಆಂಧ್ರ ಪ್ರದೇಶದಲ್ಲಿ ದೇಶದಲ್ಲೇ ಅತಿದೊಡ್ಡ ಚುನಾವಣಾ ಅಕ್ರಮ ನಡೆದಿದೆ ಎಂದು ವೈಎಸ್ಆರ್‌ಸಿಪಿ ಮುಖ್ಯಸ್ಥ ಜಗನ್ ಮೋಹನ್ ರೆಡ್ಡಿ ಬುಧವಾರ ಆರೋಪಿಸಿದ್ದಾರೆ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಈ ಬಗ್ಗೆ ಮೌನವಾಗಿದ್ದಾರೆ ಎಂದು ದೂರಿದ್ದಾರೆ. ತಡೆಪಲ್ಲಿಯಲ್ಲಿರುವ ವೈಎಸ್ಆರ್‌ಸಿಪಿ ಕೇಂದ್ರ ಕಚೇರಿಯಲ್ಲಿ ಇಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಜಗನ್, ರಾಜ್ಯದಲ್ಲಿ ಚಲಾವಣೆಯಾದ ಮತಗಳಲ್ಲಿ ಸುಮಾರು 48 ಲಕ್ಷ ಮತಗಳು ಅಥವಾ ಶೇಕಡಾ 12.5 ರಷ್ಟು ಮತಗಳು ಅಕ್ರಮವಾಗಿ ಚಲಾವಣೆಯಾಗಿವೆ ಎಂದು ಆರೋಪಿಸಿದ್ದಾರೆ.

### "48 ಲಕ್ಷ ಅಕ್ರಮ ಮತ, ರಾಹುಲ್ ಗಾಂಧಿ ಮೌನ" – ವೈಎಸ್ಆರ್‌ಸಿಪಿ ಮುಖ್ಯಸ್ಥ

"ದುರದೃಷ್ಟವಶಾತ್, ರಾಹುಲ್ ಗಾಂಧಿ ಅವರು ಆಂಧ್ರಪ್ರದೇಶದ ಬಗ್ಗೆ ಏಕೆ ಮಾತನಾಡುತ್ತಿಲ್ಲ?. ಅವರು ಚಂದ್ರಬಾಬು ನಾಯ್ಡು ಅವರೊಂದಿಗೆ ಉತ್ತಮ ಸಂಬಂಧ ಹೊಂದಿರುವುದರಿಂದ ಅವರು ಈ ಬಗ್ಗೆ ತುಟಿ ಬಿಚ್ಚುತ್ತಿಲ್ಲ" ಎಂದು ಜಗನ್ ಹೇಳಿದ್ದಾರೆ.

ಆಂಧ್ರಪ್ರದೇಶದಲ್ಲಿ ನಡೆದ ಈ ಅಕ್ರಮ ದೇಶದಲ್ಲೇ ಅತಿದೊಡ್ಡ ಅಕ್ರಮ. ಮತದಾನ ಮುಗಿದು ಎಣಿಕೆ ಪ್ರಾರಂಭವಾಗುವ ಹೊತ್ತಿಗೆ, ಮತಗಳಲ್ಲಿ ಶೇಕಡಾವಾರು ವ್ಯತ್ಯಾಸ ಇಡೀ ದೇಶದಲ್ಲಿಯೇ ದೊಡ್ಡದಾಗಿದೆ ಎಂದು ಆಂಧ್ರ ಮಾಜಿ ಸಿಎಂ ಆರೋಪಿಸಿದ್ದಾರೆ.

ಕಾಂಗ್ರೆಸ್ ರಾಷ್ಟ್ರೀಯ ವಕ್ತಾರ ಮಾಣಿಕ್ಕಂ ಟ್ಯಾಗೋರ್ ಅವರನ್ನು ಪ್ರಶ್ನಿಸಿದ ಜಗನ್, ಟಿಡಿಪಿ ಮುಖ್ಯಸ್ಥ ಎನ್. ಚಂದ್ರಬಾಬು ನಾಯ್ಡು "ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುತ್ತಿದ್ದಾರೆ" ಎಂದು ಆರೋಪಿಸಿದ್ದಾರೆ.

"ನಾಯ್ಡು, ಕಣ್ಣಿಗೆ ಕಾಣುವಂತಹ ಹಲವಾರು ಹಗರಣಗಳಲ್ಲಿ ಭಾಗಿಯಾಗಿದ್ದಾರೆ. ಆದರೆ ನಾಯ್ಡು, ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಮತ್ತು ಕಾಂಗ್ರೆಸ್ ಹೈಕಮಾಂಡ್ ನಡುವೆ 'ಹಾಟ್‌ಲೈನ್' ಇರುವುದರಿಂದ ಟ್ಯಾಗೋರ್ ಈ ಬಗ್ಗೆ ಮಾತನಾಡುವುದಿಲ್ಲ" ಎಂದು ಜಗನ್ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

# ಕಾಂಗ್ರೆಸ್‌ನಲ್ಲಿ 'ಪಿತೂರಿ' ನಡೆಯುತ್ತಿದೆ; ನಾವು ಹುಷಾರಾಗಿರಬೇಕು: ಸತೀಶ್ ಜಾರಕಿಹೊಳಿ



ಬೆಂಗಳೂರು: ರಾಜಕೀಯದಲ್ಲಿ ಯಾವಾಗಲೂ ಹಗೆ ಇದ್ದೇ ಇರುತ್ತದೆ. ನಾವು ಹುಷಾರಾಗಿ ಮತ್ತು ಬಿಗಿಯಾಗಿ ಇರಬೇಕಾಗುತ್ತದೆ. ನಮ್ಮ ಎಚ್ಚರಿಕೆಯಲ್ಲಿ ನಾವು ಇರಬೇಕು. ರಾಜಕೀಯದಲ್ಲಿ ಯಾವಾಗಲೂ ಹೀಗೇ ಇರುವುದಿಲ್ಲ. ವಾಪಸ್ ಆಗಲೂಬಹುದು ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು. ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರನ್ನು ವಜಾಗೊಳಿಸಿರುವ ಸಂಬಂಧ ಸ್ವತಃ ಅವರೇ ದೆಹಲಿಗೆ ತೆರಳಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುತ್ತಾರೆ. ರಾಜಣ್ಣ ಅವರು "ಪಿತೂರಿ"ಗೆ ಬಲಿಯಾಗಿದ್ದಾರೆ ಮತ್ತು ಅದರ ಹಿಂದೆ ಯಾರಿದ್ದಾರೆಂದು ಅವರಿಗೆ ತಿಳಿದಿದೆ ಎಂದು ಹೇಳಿದರು.

ಇದನ್ನ ಸಮುದಾಯಕ್ಕೆ ಮಾಡಿದ ಮೋಸ ಅಂತ ಹೇಳಲಾಗೊಲ್ಲ. ಏನು ಅಂತ ರಾಜಣ್ಣ ಮುಂದೆ ಹೇಳ್ತೀನಿ ಅಂದಿದ್ದಾರೆ. ರಾಜಕೀಯದಲ್ಲಿ ಒಬ್ಬರ ಮೇಲೆ ಒಬ್ಬರಿಗೆ ಹಗೆ ಇರುತ್ತದೆ. ಸ್ವಲ್ಪ ಎಚ್ಚರಿಕೆಯಿಂದ ಇರಬೇಕು. ದೆಹಲಿಗೆ ರಾಜಣ್ಣ ಹೋಗ್ತೀನಿ ಎಂದು ಹೇಳಿದ್ದಾರೆ. ಆಗ ಎಲ್ಲವೂ ಸರಿ ಹೋಗಬಹುದು ಎಂದು ತಿಳಿಸಿದ್ದಾರೆ.

ಪಕ್ಷದ ನಾಯಕರಿಗೆ ಸ್ಪಷ್ಟನೆ ನೀಡುತ್ತಾರೆ. ಮುಂದೆ ಇದನ್ನು ತಿಳಿ ಮಾಡೋಣ. ಸಮುದಾಯವನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಹೇಳಲಾಗುವುದಿಲ್ಲ. ಯಾಕೆಂದರೆ ಇದು ಉದ್ದೇಶಪೂರ್ವಕವಾಗಿ ಆಗಿದ್ದಲ್ಲ. ನಾಗೇಂದ್ರ ಘಟನೆಯೇ ಬೇರೆ ಈ ಘಟನೆಯೇ ಬೇರೆ. ಮುಂದಿನ ದಿನಗಳಲ್ಲಿ ರಾಜಣ್ಣ ಅವರೇ ಇದರ ಬಗ್ಗೆ ವಿವರಣೆ ನೀಡಲಿದ್ದಾರೆ ಎಂದರು.

### ರಾಜಣ್ಣ ವಜಾ ವಿಚಾರದಲ್ಲಿ ದೆಹಲಿಗೆ ತೆರಳಲಿರುವ ಸಚಿವ – 'ಪಿತೂರಿ'ಗೆ ಬಲಿಯಾಗಿದ್ದಾರೆ

# ಬೆಂಗಳೂರಿನಲ್ಲಿ ಮತ್ತೊಂದು ರೋಡ್ ರೇಜ್: ಮಹಿಳೆಯನ್ನು ಹಿಂಬಾಲಿಸಿದ 10 ಕ್ಯಾಬ್ ಚಾಲಕರು

ಬೆಂಗಳೂರು: ಬೆಂಗಳೂರಿನಲ್ಲಿ ರೋಡ್ ರೇಜ್ ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇದೆ. ರೋಡ್ ರೇಜ್ ಪ್ರಕರಣದ ನಂತರ 10-12 ಕ್ಯಾಬ್ ಚಾಲಕರ ಗುಂಪು ಮಹಿಳೆಯನ್ನು ಹಿಂಬಾಲಿಸಿ ಹಲ್ಲೆ ನಡೆಸಿರುವ ಘಟನೆ ನಗರದ ಹುಳಿಮಾವು ನಲ್ಲಿ ನಡೆದಿದೆ. ಈ ಗುಂಪು ತನ್ನ ಕುಟುಂಬದ ಮೇಲೂ ಹಲ್ಲೆ ನಡೆಸಿದೆ ಎಂದು ಮಹಿಳೆಯೊಬ್ಬರು ಆರೋಪಿಸಿದ್ದಾರೆ.

### ಹುಳಿಮಾವು ಪ್ರದೇಶದಲ್ಲಿ ಕಾರು ಧ್ವಂಸ, ಹಲ್ಲೆ – ಪೊಲೀಸ್ ತನಿಖೆ ಪ್ರಾರಂಭ

ಅಡ್ಡಾದಿಡ್ಡಿಯಾಗಿ ನನ್ನ ಕಾರನ್ನು ಹಿಂದಿಕ್ಕಿದ್ದ ಕ್ಯಾಬ್ ಚಾಲಕರೊಬ್ಬರು, ಕ್ಯಾತೆ ತೆಗೆದು ಜಗಳ ಮಾಡಿದರು. ತದನಂತರ ಗುಂಪು ತನ್ನ ಅಪಾರ್ಟ್‌ಮೆಂಟ್‌ನವರೆಗೆ ಇಟ್ಟಿಗೆ ಹಿಡಿದುಕೊಂಡು ಹಿಂಬಾಲಿಸಿತು ಎಂದು ಮಹಿಳೆ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ವ್ಯಕ್ತಿಯೊಬ್ಬ ಕಾರಿನ ಗಾಜನ್ನು ಗುದ್ದುವುದು ಸಿಸಿಟಿವಿ ದೃಶ್ಯಾವಳಿಯಲ್ಲಿ ಸೆರೆಯಾಗಿದೆ. ಜಗಳದ ವೇಳೆ ಕಾರಿನ ಕಿಟಕಿಯೊಂದು ಒಡೆದುಹೋಗಿದೆ. ಇದಾದ ಸ್ವಲ್ಪ ಸಮಯದ ನಂತರ ಕ್ಯಾಬ್ ಡ್ರೈವರ್‌ಗಳ ಗುಂಪು ಎಲ್ಲಾ ಕಡೆಯಿಂದ ಮಹಿಳೆಯ ಕಾರನ್ನು ಸುತ್ತುವರೆದಿವೆ. ಚಾಲಕರ ಗುಂಪು ಮಹಿಳೆಯ ವಸತಿ ಪ್ರದೇಶಕ್ಕೆ ಪ್ರವೇಶಿಸುವುದನ್ನು ಮತ್ತೊಂದು ವೀಡಿಯೊ ತೋರಿಸುತ್ತದೆ. ಆಕೆಯ ಕುಟುಂಬದ ಮೇಲೂ ಹಲ್ಲೆ ನಡೆದಿದೆ ಎಂದು ಆರೋಪಿಸಲಾಗಿದೆ.

ದುಷ್ಕರ್ಮಿಗಳು ಆಕೆಯ ಕಾರನ್ನು ಧ್ವಂಸಗೊಳಿಸಿದ್ದು, ಮಧ್ಯಪ್ರವೇಶಿಸಲು ಪ್ರಯತ್ನಿಸಿದಾಗ ಆಕೆಯ ತಂದೆ ಮತ್ತು ಸಂಬಂಧಿಕರ ಮೇಲೆ ಹಲ್ಲೆ ನಡೆಸಿದ್ದಾರೆ. ನಂತರ ಆಕೆಯ ತಂದೆ ಹುಳಿಮಾವು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಕೂಡಲೇ ಆರೋಪಿಗಳನ್ನು ಬಂಧಿಸುವಂತೆ ಒತ್ತಾಯಿಸಿದ್ದಾರೆ.

ಈ ಸಂಬಂಧ ಭಾರತೀಯ ನ್ಯಾಯ ಸಂಹಿತೆಯ (ಬಿಎನ್‌ಎಸ್‌ಎಸ್) ವಿವಿಧ ಸೆಕ್ಷನ್ ಅಡಿಯಲ್ಲಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದು, ತನಿಖೆಗಳು ನಡೆಯುತ್ತಿವೆ.

# ಆರ್‌ಸಿಬಿ ವಿಜಯೋತ್ಸವ ವಿವಾದ – ಅಶೋಕ್‌ಗೆ ಡಿಕೆಶಿ ತಿರುಗೇಟು





ಬೆಂಗಳೂರು: ಆರ್ ಸಿಬಿ ವಿಜಯೋತ್ಸವದ ವೇಳೆ ತೆರೆದ ವಾಹನದಲ್ಲಿ ಮೆರವಣಿಗೆಗೆ ಅವಕಾಶ ನೀಡದ ಗೃಹ ಸಚಿವರ ನಡೆಯನ್ನು ಖಂಡಿಸಿ ಟ್ವೀಟ್ ಮಾಡಿದ್ದು ನಿಮ್ಮದೇ ಪಕ್ಷವಲ್ಲವೇ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ವಿರೋಧ ಪಕ್ಷದ ನಾಯಕ ಅಶೋಕ್ ಅವರಿಗೆ ತಿರುಗೇಟು ನೀಡಿದರು.

ವಿಧಾನಸಭೆಯಲ್ಲಿ ನಿಲುವಳಿ ಸೂಚನೆ ಮೇಲೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಪ್ರಕರಣದ ಬಗ್ಗೆ ಚರ್ಚೆ ನಡೆಸುತ್ತಿರುವಾಗ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಧ್ಯ ಪ್ರವೇಶಿಸಿ ಛೇಡಿಸಿದರು.

ಆರ್ ಸಿಬಿ ಕೇವಲ ದುಡ್ಡು ಮಾಡುವ ಉದ್ದೇಶ ಹೊಂದಿದೆಯೇ ಹೊರತು ಅವರಿಂದ ಯಾವುದೇ ಉತ್ತಮ ಕೆಲಸವಾಗಿಲ್ಲ. ಸರ್ಕಾರ ಜನರ ಸಂಭ್ರಮಾಚರಣೆ ವೇಳೆ ಕ್ರೆಡಿಟ್ ತೆಗೆದುಕೊಳ್ಳಲು ಮುಂದಾಗಿ ಈ ಕಾರ್ಯಕ್ರಮ ಆಯೋಜಿಸಿತು. ತರಾತುರಿಯಲ್ಲಿ ಕಾರ್ಯಕ್ರಮ ಆಯೋಜಿಸಿದ್ದಕ್ಕೆ ಈ ಕಾಲ್ತುಳಿತ ಪ್ರಕರಣ ಸಂಭವಿಸಿದ್ದು, ಇದಕ್ಕೆ ಸರ್ಕಾರವೇ ಹೊಣೆ ಎಂದು ಆರ್. ಅಶೋಕ್ ಆರೋಪ ಮಾಡಿದರು.

ಇದಕ್ಕೆ ಪ್ರತ್ಯುತ್ತರ ನೀಡಿದ ಡಿಸಿಎಂ ಅವರು, ಅಭಿಮಾನಿಗಳ ವಿಜಯೋತ್ಸವದ ವೇಳೆ ಮೆರವಣಿಗೆಗೆ ಸರ್ಕಾರ ನಿರಾಕರಿಸಿದಾಗ ಬಿಜೆಪಿ ವತಿಯಿಂದ ಬಂದ ಟ್ವೀಟ್ ಬಗ್ಗೆಯೂ ಮಾತನಾಡಿ. ಅದನ್ನು ಯಾಕೆ ಹಾಗೇ ಬಿಡುತ್ತೀರಿ? ಹಲವಾರು ವರ್ಷಗಳ ಅಭಿಮಾನಿಗಳ ಕನಸನ್ನು ಆರ್ ಸಿಬಿ ಈ ವರ್ಷ ನನಸು ಮಾಡಿದೆ. ಆದರೆ ತೆರೆದ ಬಸ್ ನಲ್ಲಿ ಆಟಗಾರರ ವಿಜಯೋತ್ಸವಕ್ಕೆ ಅನುಮತಿ ನಿರಾಕರಿಸುವ ಮೂಲಕ ಆಕಸ್ಮಿಕ ಗೃಹ ಸಚಿವ ಪರಮೇಶ್ವರ್ ಅವರು ತಾವೊಬ್ಬ ಅಸಮರ್ಥ ಹಾಗೂ ಅದಕ್ಷ ಎಂಬುದನ್ನು ಸಾಬೀತುಪಡಿಸಿದ್ದಾರೆ.

ತಮ್ಮ ನೆಚ್ಚಿನ ಆಟಗಾರರನ್ನು ಅತಿ ಹತ್ತಿರದಿಂದ ಕಣ್ತುಂಬಿಕೊಳ್ಳಲು ಅಭಿಮಾನಿಗಳು ಕಾಯುತ್ತಿದ್ದು, ಅಭಿಮಾನಿಗಳ ಸಂಭ್ರಮಕ್ಕೆ ಕಲ್ಲು ಹಾಕಿದ ಪರಮೇಶ್ವರ್' ಎಂದು ಬಿಜೆಪಿ ಅಧಿಕೃತ ಎಕ್ಸ್ ಖಾತೆಯಲ್ಲಿ ಟ್ವೀಟ್ ಮಾಡಿತ್ತು. ಆ ಬಗ್ಗೆಯೂ ನೀವು ಹೇಳಬೇಕಲ್ಲವೇ" ಎಂದು ಕಾಲೆಳೆದರು.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.